ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE 26/8/2020

# ನೆರೆಗೆ ಕೇಂದ್ರದ ಮೊರೆ

## ಶೀಘ್ರ ಕೇಂದ್ರಕ್ಕೆ ಪ್ರವಾಹ ಹಾನಿ ಕುರಿತ ಸಮಗ್ರ ವರದಿ: ಬಿಎಸ್‌ವೈ ಮುಂದಿನ ವಾರವೇ ದೆಹಲಿಗೆ ಭೇಟಿ: ಹೆಚ್ಚಿನ ಪರಿಹಾರಕ್ಕೆ ಮನವಿ

ಬೆಳಗಾವಿ/ಬಾಗಲಕೋಟೆ/ವಿಜಯಪುರ: ಕಳೆದ ವರ್ಷದ ನೆರೆ ಮಾಸುವ ಮುನ್ನವೇ ಮತ್ತೊಮ್ಮೆ ಪ್ರವಾಹ ಎದುರಿಸಿರುವ ಉತ್ತರ ಕರ್ನಾಟಕದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಂಗಳವಾರ ವೈಮಾನಿಕ ಸಮೀಕ್ಷೆ ನಡೆಸಿದರು.

ಕೃಷ್ಣಾ, ಮಲಪ್ರಭಾ, ಘಟಪ್ರಭಾ, ವೇದಗಂಗಾ, ದೂಧಗಂಗಾ, ಹಿರಣ್ಯಕೇಶಿ ನದಿಗಳ ಅಬ್ಬರಕ್ಕೆ ಕೊಚ್ಚಿ ಹೋದ ಜನರ ಬದುಕಿನ ಪರಿಶೀಲನೆ ನಡೆಸಿದರು.

ನಂತರ ಸುದ್ದಿಗಾರರ ಜತೆ ಮಾತನಾಡಿದ ಸಿಎಂ ಯಡಿಯೂರಪ್ಪ ಅತಿವೃಷ್ಟಿಯಿಂದ ಆಗಿರುವ ಹಾನಿ ಕುರಿತು ಸಮಗ್ರ ವರದಿಯನ್ನು ಶೀಘ್ರದಲ್ಲೇ ಕೇಂದ್ರಕ್ಕೆ ಕಳುಹಿಸಲಾಗುವುದು ಹಾಗೂ ಹೆಚ್ಚಿನ ಪರಿಹಾರ ಬಿಡುಗಡೆ ಮಾಡುವಂತೆ ಕೋರಿ ಮುಂದಿನವಾರ ದೆಹಲಿಗೆ ತೆರಳಿ ಮನವಿ ಮಾಡಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಮಳೆ ಹಾಗೂ ಪ್ರವಾಹದಿಂದ ಉಂಟಾಗಿರುವ ಹಾನಿಯ ಕುರಿತು ಶೀಘ್ರವೇ ಬೆಂಗಳೂರಿನಲ್ಲಿ ಎಲ್ಲ ಶಾಸಕರ ಸಭೆ ಕರೆಯಲಾಗುವುದು. ಅತಿವೃಷ್ಟಿಯಿಂದ ಆಗಿರುವ ಹಾನಿಗೆ ಸಮರ್ಪಕ ಪರಿಹಾರ ನೀಡಲು ಯೋಜನೆ ರೂಪಿಸಲಾಗುವುದು ಎಂದರು.

ಇದೇ ವೇಳೆ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಧಾರವಾಡ, ಗದಗ ಜಿಲ್ಲೆಗಳ ಜನಪ್ರತಿನಿಧಿಗಳು, ಅಧಿಕಾರಿಗಳ ಜತೆ ಸಭೆ ನಡೆಸಿ ನೆರೆ ಹಾನಿ ಹಾಗೂ ಪುನರ್ವಸತಿಗೆ ಕೈಗೊಂಡ ಕ್ರಮಗಳ ಬಗ್ಗೆ ಸಮಗ್ರ ಮಾಹಿತಿ ಪಡೆದುಕೊಂಡರು. ಅಲ್ಲದೇ ಬೆಳೆ ಹಾನಿ, ಕುಸಿದು ಬಿದ್ದ ಮನೆಗಳಿಗೆ ಶೀಘ್ರ ಪರಿಹಾರ ಕಲ್ಪಿಸುವ ಭರವಸೆ ನೀಡಿದರು.

ಪದೇ ಪದೇ ಉಕ್ಕಿ ಹರಿದು ಹಾನಿ ಮಾಡುವ ಮಲಪ್ರಭಾ ನದಿ ಒತ್ತುವರಿ ಸರ್ವೇಗೂ ಸಮ್ಮತಿ ಸೂಚಿಸಿದರು. ನದಿಯ ಮೂಲ ಸ್ವರೂಪ 135 ಮೀಟರ್ ಇದ್ದು, ಈಗ 10 ಮೀಟರ್ ಮಾತ್ರ ಉಳಿದಿದೆ. ಇದರಿಂದ ಕೇವಲ 2 ಸಾವಿರ ಕ್ಯೂಸೆಕ್ ನೀರು ಮಾತ್ರ ಹರಿದು ಹೋಗುತ್ತಿರುವುದರಿಂದ ಪ್ರವಾಹ ಉಂಟಾಗುತ್ತಿದೆ. ಹೀಗಾಗಿ ನದಿ ಪಾತ್ರದಲ್ಲಿ ಆದ ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗುವುದು ಎಂದರು.

### ಮೋದಿಗೆ ಮನವಿ



ಸಿಎಂ ಬಿ.ಎಸ್.ಯಡಿಯೂರಪ್ಪ ಅವರು ಮಂಗಳವಾರ ಬೆಳಗಾವಿ, ಬಾಗಲಕೋಟೆ, ವಿಜಯಪುರ ಜಿಲ್ಲೆಗಳಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾಗಿರುವ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದರು.



### ಆಲಮಟ್ಟಿಗೆ ಬಾಗಿನ ಅರ್ಪಣೆ

ಬಾಗಲಕೋಟೆ: ಮೈದುಂಬಿಕೊಂಡ ಕೃಷ್ಣೆಯ ಮಡಿಲಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಮಂಗಳವಾರ ಬಾಗಿನ ಅರ್ಪಿಸಿ, ರೈತರ ಬಾಳು ಹಸನಾಗಿಸು ಎಂದು ಪ್ರಾರ್ಥಿಸಿದರು. ಮಧ್ಯಾಹ್ನ ಬೆಳಗಾವಿಯಿಂದ ಘಟಪ್ರಭಾ ಮತ್ತು ಮಲಪ್ರಭಾ ನದಿಗಳಿಂದ ಉಂಟಾದ ಪ್ರವಾಹ ಹಾನಿ ಕುರಿತು ವೈಮಾನಿಕ ಸಮೀಕ್ಷೆ ನಡೆಸಿದ ಬಳಿಕ ಮಧ್ಯಾಹ್ನ ಆಲಮಟ್ಟಿಗೆ ಆಗಮಿಸಿದರು. ಡಿಸಿಎಂ ಗೋವಿಂದ ಕಾರಜೋಳ, ಕಂದಾಯ ಸಚಿವ ಆರ್. ಅಶೋಕ, ಜಲಸಂಪನ್ಮೂಲ ಸಚಿವ ರಮೇಶ ಜಾರಕಿಹೊಳಿ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸಚಿವ ಸಿ.ಸಿ. ಪಾಟೀಲ ಸೇರಿದಂತೆ ಸ್ಥಳೀಯ ಶಾಸಕರು, ಜಿಪಂ ಅಧ್ಯಕ್ಷರೊಂದಿಗೆ ಆಲಮಟ್ಟಿಯಲ್ಲಿ ಕೃಷ್ಣೆಗೆ ಬಾಗಿನ ಅರ್ಪಿಸಿದರು.